**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ**

**ಆಳಂದ**

ಸಿ.ಸಿ, ನಂಬರ 65/2024 ಸಿ.ಡಬ್ಲೂ.25 ಪಿ.ಡಬ್ಲೂ.16

| | |
|---|---|
| ಹೆಸರು | ಪ್ರಕಾಶ |
| ತಂದೆ/ಗಂಡ | ರೇವಣಸಿದ್ದಪ್ಪಾ |
| ವಯಸ್ಸು | 41 ವರ್ಷ |
| ಉದ್ಯೋಗ | ಸಿ.ಪಿ.ಐ |
| ವಾಸಸ್ಥಳ | ಪ್ರಧಾನ ಕಚೇರಿ ಬೆಂಗಳೂರು |

ದಿನಾಂಕ 06-03-2026
ಸತ್ಯ ಪ್ರತಿಜ್ಞೆಯ ಮೇರೆಗೆ

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:**

ನಾನು ಅಕ್ಟೋಬರ 2023 ರಿಂದ ನವೆಂಬರ 2025 ವರೆಗೆ ಸಿ.ಪಿ.ಐ ಆಳಂದ ಅಂತಾ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 20-10-2023 ರಂದು ಚಾಸಾ 24 ರವರ ಕಡೆಯಿಂದ ಈ ಪ್ರಕರಣದ ಕಡವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ. ಅದೇ ದಿನ ಆರೋಪಿಯು ಠಾಣೆಗೆ ಹಾಜರಾದ ಮೇರೆಗೆ ದಸ್ತಗೀರ ನಿಯಮ ಪಾಲಿಸಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ ಮತ್ತು ವಾಹನದ ದಾಖಲಾತಿಗಳನ್ನು ಪಡೆದುಕೊಂಡು ಹಸ್ತಾಂತರಿಸಿರುತ್ತೇನೆ. ದಿಃ 06-11-2023 ರಂದು ಎಮ.ವಿ.ಎ ವರದಿಯನ್ನು ಪಡೆದುಕೊಂಡಿರುತ್ತೇನೆ. ದಿಃ 18-11-2023 ರಂದು ಚಾಸಾ 22 ರವರ ಕಡೆಯಿಂದ ಕಲಂ 65ಬಿ ಅಡಿಯಲ್ಲಿ ಸಲ್ಲಿಸಿದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ತನಿಖೆ ಪೂರ್ಣಗೊಂಡ ಕಾರಣ ನ್ಯಾಯಾಲಯಕ್ಕೆ ಅಂತಿಮ ವರದಿನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ನಿಪಿ.3 ರಲ್ಲಿ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 3(ಎ) ಅಂತಾ ಗುರುತಿಸಲಾಯಿತು. 65 ಬಿ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 27(ಎ) ಅಂತಾ ಗುರುತಿಸಲಾಯಿತು. ನಾನು ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ.

ಪಾಟೀ ಸವಾಲುಃ ಆರೋಪಿತರ ಪರ **ಶ್ರೀ.ಬಿ. ಎ.ಡಿ** ವಕೀಲರಿಂದ:

ದಿಃ 20-10-2023 ರಂದು ಚಾಸಾ 24 ರವರ ಕಡೆಯಿಂದ ಈ ಪ್ರಕರಣದ ಕಡವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ಆರೋಪಿಯು ಠಾಣೆಗೆ ಹಾಜರಾದ ಮೇರೆಗೆ ದಸ್ತಗೀರ ನಿಯಮ ಪಾಲಿಸಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ ಮತ್ತು ವಾಹನದ ದಾಖಲಾತಿಗಳನ್ನು ಪಡೆದುಕೊಂಡು ಹಸ್ತಾಂತರಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ

ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 06-11-2023 ರಂದು ಎಮ.ವಿ.ಎ ವರದಿಯನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 18-11-2023 ರಂದು ಚಾಸಾ 22 ರವರ ಕಡೆಯಿಂದ ಕಲಂ 65ಬಿ ಅಡಿಯಲ್ಲಿ ಸಲ್ಲಿಸಿದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ತನಿಖೆ ಪೂರ್ಣಗೊಂಡ ಕಾರಣ ನ್ಯಾಯಾಲಯಕ್ಕೆ ಅಂತಿಮ ವರದಿನ್ನು ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಸಿ.ಸಿ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ